# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ.ಬಿ12(1)ಪಿಆರ್/252/24–25

ಮುಖ್ಯ ಆಯುಕ್ತರವರ ಕಛೇರಿ,
ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ:14.02.2025

**ಸುತ್ತೋಲೆ**

ವಿಷಯ: ಪಾಲಿಕೆಯ ವೃಂದ ಮತ್ತು ನೇಮಕಾತಿ ನಿಯಮಾವಳಿಯಲ್ಲಿ ಮುಂಬಡ್ತಿ ಹೊಂದಲು ಹಾಗೂ ಪರೀಕ್ಷಾರ್ಥ ಅವಧಿ ಘೋಷಿಸುವ ಸಲುವಾಗಿ ನಿಗಧಿಪಡಿಸಿರುವ ಇಲಾಖಾ ಪರೀಕ್ಷೆಗಳ ಕುರಿತು.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ವಿವಿಧ ವೃಂದದ ಗ್ರೂಪ್ 'ಎ' 'ಬಿ' ಮತ್ತು 'ಸಿ' ಹುದ್ದೆಗಳನ್ನು ಮುಂಬಡ್ತಿ ಮುಖಾಂತರ ಭರ್ತಿ ಮಾಡಲು ಹಾಗೂ ಪರೀಕ್ಷಾರ್ಥ ಅವಧಿ ಘೋಷಿಸಲು ದಿನಾಂಕ: 16–03–2020ರಂದು ಹೊರಡಿಸಿರುವ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಇಲಾಖಾ ಪರೀಕ್ಷೆಗಳನ್ನು ನಿಗಧಿಪಡಿಸಿದೆ. ಅದರಂತೆ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವೃಂದದ ಅಧಿಕಾರಿ / ನೌಕರರುಗಳು ಆಯಾ ಹುದ್ದೆಗೆ ಮುಂಬಡ್ತಿ ಹೊಂದಲು ಹಾಗೂ ಪರೀಕ್ಷಾರ್ಥ ಸೇವಾ ಅವಧಿಯನ್ನು ಘೋಷಿಸಿಕೊಳ್ಳಲು ಈ ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ವಯ ನಿಗಧಿತ ಇಲಾಖಾ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಬೇಕಾಗಿರುತ್ತದೆ.

ಈ ಹಿನ್ನಲೆಯಲ್ಲಿ ದಿನಾಂಕ: 16–03–2020ರಂದು ಹೊರಡಿಸಿರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವೃಂದ ಮತ್ತು ನೇಮಕಾತಿ ನಿಯಮಾವಳಿಯಂತೆ ಪರೀಕ್ಷಾರ್ಥ ಸೇವಾ ಅವಧಿ ಮತ್ತು ಮುಂಬಡ್ತಿ ಹೊಂದಲು ನಿಗಧಿತ ಇಲಾಖಾ ಪರೀಕ್ಷೆಗಳಲ್ಲಿ ಕಡ್ಡಾಯವಾಗಿ ಉತ್ತೀರ್ಣರಾಗತಕ್ಕದ್ದು. ತಪ್ಪಿದಲ್ಲಿ ಸದರಿ ಇಲಾಖಾ ಪರೀಕ್ಷೆಗಳನ್ನು ಪೂರೈಸದ ಅಧಿಕಾರಿ / ನೌಕರರುಗಳು ಪರೀಕ್ಷಾರ್ಥ ಸೇವಾ ಅವಧಿಯನ್ನು ಘೋಷಿಸಿಕೊಳ್ಳಲು ಮತ್ತು ಮುಂಬಡ್ತಿ ಹೊಂದಲು ನಿಯಮಾನುಸಾರ ಅರ್ಹರಿರುವುದಿಲ್ಲವೆಂದು ಈ ಮೂಲಕ ಸೂಚಿಸಿದೆ.

ಮಾನ್ಯ ಮುಖ್ಯ ಆಯುಕ್ತರು ರವರ ಆದೇಶದಂತೆ)

14.2.25

ವಿಶೇಷ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು : ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಯವರಿಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ವಲಯ ಆಯುಕ್ತರು / ಜಂಟಿ ಆಯುಕ್ತರು ರವರುಗಳಿಗೆ ಕಳುಹಿಸಿದೆ.
: ವಲಯ ಉಪ ಆಯುಕ್ತರು ರವರುಗಳಿಗೆ ಕಳುಹಿಸಿದೆ.
: ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರಿಗೆ ಅಗತ್ಯ ಕ್ರಮಕ್ಕೆ ಕಳುಹಿಸಿದೆ.
: ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳಿಗೆ ಅಗತ್ಯ ಕ್ರಮಕ್ಕೆ ಕಳುಹಿಸಿದೆ.
: ಮಾಹಿತಿ ತಂತ್ರಜ್ಞಾನ ಸಲಹೆಗಾರರು ರವರಿಗೆ ಕಳುಹಿಸುತ್ತಾ, ಸದರಿ ಸುತ್ತೋಲೆಯನ್ನು ಪಾಲಿಕೆಯ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು ಸೂಚಿಸಿದೆ.
: ಅಧ್ಯಕ್ಷರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಿ / ನೌಕರರುಗಳ ಕ್ಷೇಮಾಭಿವೃದ್ಧಿ ಸಂಘ (ರಿ.) ರವರಿಗೆ ಕಳುಹಿಸಿದೆ.
: ಕಛೇರಿ ಪ್ರತಿ.

DCTO/141/1605/24-25
18/02/2025

19/2/25